**ಮಾನ್ಯ ಶಾಸಕರು, ವಿಧಾನ ಪರಿಷತ್ ನ ಶಾಸಕರಾದ ಶ್ರೀ ಗೋವಿಂದರಾಜು ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ ಸಲ್ಲಿಸುವ ಕುರಿತು.**

**ಪ್ರಶ್ನೆ:-**

ರಾಜ್ಯದಲ್ಲಿ ಎಂಟು ಸಾವಿರಕ್ಕೂ ಹೆಚ್ಚು ಶಾಲೆಗಳ ಬಿಸಿಯೂಟ ತಯಾರಿಕಾ ಕೊಠಡಿಗಳ ಉಪಯೋಗಕ್ಕೆ ಬಾರದಷ್ಟು ದುಸ್ಥಿತಿಗೆ ತಲುಪಿವೆ. ಅವುಗಳನ್ನು ನರೇಗಾ ಯೋಜನೆಯಡಿ ನಿರ್ಮಿಸಿಕೊಡಲು ಜಿಲ್ಲಾಡಳಿತಗಳಿಗೆ ಸೂಚಿಸಿದ್ದರೂ ಪ್ರಗತಿ ಕುಂಟುತ್ತಾ ಸಾಗಿದೆ. ಶಾಲಾ ಶಿಕ್ಷಣ ಮತ್ತು ಸುರಕ್ಷತಾ ಇಲಾಖೆಯು ಯಾವ್ಯಾವ ಶಾಲೆಗಳಲ್ಲಿ ಅಡುಗೆ ಕೋಣೆಗಳು ಶಿಥಿಲಗೊಂಡಿವೆ ಎಂಬ ಬಗ್ಗೆ ಕಳೆದ ವರ್ಷ ಡಿಸೆಂಬರ್‌ನಲ್ಲೇ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮಾಹಿತಿ ಪಡೆದಿತ್ತು. ಈ ವೇಳೆ 8,533 ಅಡುಗೆ ಕೊಠಡಿಗಳು ಬಳಸಲು ಸಾಧ್ಯವಾಗದಷ್ಟು ಮಟ್ಟಕ್ಕೆ ಹಾಳಾಗಿರುವುದು ಕಂಡುಬಂದಿತ್ತು. ತಕ್ಷಣ ಈ ಎಲ್ಲಾ ಅಡುಗೆ ಕೋಣೆಗಳನ್ನು ನರೇಗಾ ಯೋಜನೆಯಡಿ ಹೊಸದಾಗಿ ನಿರ್ಮಿಸಿಕೊಡುವಂತೆ ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ ಕಳೆದ ಜನವರಿಯಲ್ಲಿ ಇಲಾಖೆಯ ಅಂದಿನ ಪ್ರಧಾನ ಕಾರ್ಯದರ್ಶಿ ಅವರು ಪತ್ರ ಬರೆದಿದ್ದರು. ಇದಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಒಪ್ಪಿಗೆಯನ್ನೂ ಪಡೆಯಲಾಗಿದ್ದು, ಆ ಇಲಾಖೆಯೂ ಪ್ರತ್ಯೇಕ ಸೂಚನೆ ನೀಡಿದೆ.

ಆದರೆ, ಜಿಲ್ಲಾಡಳಿತಗಳು ಶಾಲಾ ಅಡುಗೆ ಕೊಠಡಿಗಳ ನಿರ್ಮಾಣದಲ್ಲಿ ಆದ್ಯತೆ ನೀಡುತ್ತಿಲ್ಲ ಎಂಬ ಆರೋಪ ಶಾಲಾ ಮುಖ್ಯಶಿಕ್ಷಕರಿಂದಲೇ ಕೇಳಿಬರುತ್ತಿದೆ. ರಾಜ್ಯದ 46,000 ಕ್ಕೂ ಹೆಚ್ಚು ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿವರೆಗಿನ ಸುಮಾರು 48 ಲಕ್ಷ ಮಕ್ಕಳಿಗೆ ಪ್ರತೀ ದಿನ ಶಾಲೆಗಳಲ್ಲಿ ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ ಯೋಜನೆಯಡಿ ಮಧ್ಯಾಹ್ನದ ಬಿಸಿಯೂಟ ತಯಾರಿಸಿ ನೀಡಲಾಗುತ್ತಿದೆ. ಕೆಲವು ನಗರ ಪ್ರದೇಶದ ಶಾಲೆಗಳಲ್ಲಿ ಇಸ್ಕಾನ್, ಅದಮ್ಯ ಚೇತನ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಮಕ್ಕಳಿಗೆ ಬಿಸಿಯೂಟ ಪೂರೈಸಲಾಗುತ್ತಿರುವುದು ಬಿಟ್ಟರೆ ಬಹುತೇಕ ಗ್ರಾಮೀಣ ಭಾಗದ ಎಲ್ಲಾ ಶಾಲೆಗಲ್ಲೂ ಆಯಾ ಶಾಲೆಗಳಲ್ಲೇ ಬಿಸಿಯೂಟ ತಯಾರಿಸಲಾಗುತ್ತಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರ ಈ ಕೂಡಲೇ ಗಮನಹರಿಸಿ ಸಮಸ್ಯೆಯನ್ನು ಬಗೆಹರಿಸಬೇಕಾಗಿರುತ್ತದೆ. ಈ ವಿಷಯವನ್ನು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ತಾವು ಅನುಮತಿ ನೀಡಬೇಕೆಂದು ಕೋರುತ್ತೇನೆ.

**ಉತ್ತರ:-**

ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ಎಲ್ಲಾ ವಿದ್ಯಾರ್ಥಿಗಳಿಗೂ ಪ್ರತಿ ದಿನ ಶಾಲೆಗಳಲ್ಲಿ ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಯೋಜನೆಯಡಿ ಮಧ್ಯಾಹ್ನದ ಬಿಸಿಯೂಟ ತಯಾರಿಸಿ ನೀಡಲಾಗುತ್ತಿದೆ. ಇದರಲ್ಲಿ ಅಕ್ಷಯಪಾತ್ರೆ (ಇಸ್ಕಾನ್), ಅದಮ್ಯ ಚೇತನ ಇನ್ನೂ ಮುಂತಾದ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಬಿಸಿಯೂಟವನ್ನು ನೀಡಲಾಗುತ್ತಿದೆ. ಇಂತಹ ಸ್ವಯಂ ಸೇವಾ ಸಂಸ್ಥೆಗಳಿಂದ ಒದಗಿಸಲಾದ

ಶಾಲೆಗಳಿಗೆ ಪ್ರತ್ಯೇಕ ಅಡುಗೆ ಕೋಣೆಯ ಅವಶ್ಯಕತೆ ಇರುವುದಿಲ್ಲ. ಆದರೆ ಶಾಲಾ ಹಂತದಲ್ಲಿಯೇ ಕೇಂದ್ರೀಕೃತ ಅಡುಗೆ ಕೋಣೆ ಮೂಲಕ ಬಿಸಿಯೂಟ ತಯಾರಿಸಿ ವಿದ್ಯಾರ್ಥಿಗಳಿಗೆ ವಿತರಿಸಲು ಸುಸಜ್ಜಿತ ಅಡುಗೆ ಕೋಣೆಯ ಅಗತ್ಯವಿರುತ್ತದೆ.

ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಅಗತ್ಯತೆಯನ್ನು ಗುರುತಿಸಿರುವ 8,533 ಸರ್ಕಾರಿ ಶಾಲೆಗಳಲ್ಲಿ ಆಧ್ಯತೆಯ ಮೇರೆಗೆ ಅಡುಗೆ ಕೋಣೆಗಳನ್ನು ನರೇಗಾ ಯೋಜನೆಯಡಿ ಹೊಸದಾಗಿ ನಿರ್ಮಾಣ ಮಾಡಿಕೊಡುವಂತೆ 2024-25ನೇ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಅದರಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಬಿಸಿಯೂಟದ ಅಡುಗೆ ಕೋಣೆಯ ನಿರ್ಮಾಣದ ಕುರಿತಂತೆ ಶಿಕ್ಷಣಾಧಿಕಾರಿಗಳು ಪಿ.ಎಂ.ಪೋಷಣ್ ಜಿಲ್ಲಾ ಪಂಚಾಯತ್ ರವರು ಮಾಹಿತಿಯನ್ನು ಒದಗಿಸಿರುತ್ತಾರೆ. ಈ ಸಂಬಂಧ ಜಿಲ್ಲಾ ಹಂತದಲ್ಲಿ ನಡೆಯುವ ಕೆ.ಡಿ.ಪಿ ಸಭೆಗಳಲ್ಲೂ ಸಹ ಪ್ರಗತಿ ಪರಿಶೀಲನೆಯನ್ನು ನಡೆಸಿ ಜಿಲ್ಲಾ ಹಂತದಲ್ಲಿ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಅಡುಗೆ ಕೋಣೆ ನಿರ್ಮಾಣದ ಬಗ್ಗೆ ಅನುಪಾಲನೆ ಕೈಗೊಳ್ಳಲು ಸೂಚಿಸಲಾಗಿರುತ್ತದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನರೇಗಾ ಯೋಜನೆಯಡಿ ಅಡುಗೆ ಕೋಣೆಗಳ ನಿರ್ಮಾಣಕ್ಕೆ ಆದ್ಯತೆ ನೀಡಲು ಕ್ರಮವಹಿಸಿರುವುದಾಗಿ ತಿಳಿಸಿರುತ್ತಾರೆ. 2025-26ನೇ ಸಾಲಿನ ನವೆಂಬರ್ 2025ರ ಅಂತ್ಯಕ್ಕೆ 2,224 ಅಡುಗೆ ಕೋಣೆಗಳ ನಿರ್ಮಾಣವನ್ನು ಪೂರ್ಣಗೊಳಿಸಿರುವುದರ ಮಾಹಿತಿಯನ್ನು ಒದಗಿಸಿರುತ್ತಾರೆ. ಉಳಿದ 6,358 ಶಾಲೆಗಳ ಅಡುಗೆ ಕೋಣೆಗಳನ್ನು ನಿರ್ಮಾಣಗೊಳಿಸುವುದು ಬಾಕಿ ಇರುತ್ತದೆ. ಬಾಕಿ ಇರುವ ಅಡುಗೆ ಕೋಣೆಗಳ ನಿರ್ಮಾಣ ಕಾರ್ಯವನ್ನು ಸಂಬಂಧಿಸಿದ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಕಾರದೊಂದಿಗೆ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ. ಅನುಬಂಧ-1 ರಲ್ಲಿ ಜಿಲ್ಲಾವಾರು ಮಾಹಿತಿ ಸಲ್ಲಿಸಿದೆ.

**ಇಪಿ 141 ಯೋಸಕ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

ಅನುಬಂಧ

ಅನುಬಂಧ-1

## 2024-25 ರ 2025-26 ರವರೆಗಿನ ಬೇಡಿಕೆಯಂತೆ ನವೆಂಬರ್ -2025ರ ಅಂತ್ಯಕ್ಕೆ ಅಡುಗೆ ಕೋಣೆ ನಿರ್ಮಾಣದ ಪ್ರಗತಿ ವಿವರ

| ಕ್ರಸಂ | ಜಿಲ್ಲೆಯ ಹೆಸರು | ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆ | ಗ್ರಾಮೀಣ ಪ್ರದೇಶಗಳಲ್ಲಿ ಹೊಸ ಅಡುಗೆ ಕೋಣೆ ಬೇಡಿಕೆ ಇರುವ ಶಾಲೆಗಳ ಸಂಖ್ಯೆ | 2025-26ನೇ ಸಾಲಿನ ಅಡುಗೆ ಕೋಣೆಗಳ ನಿರ್ಮಾಣದ ಪ್ರಗತಿ ವಿವರ | ಉಳಿಕೆ | ಷರಾ |
|---|---|---|---|---|---|---|
| 1 | ಬೆಂಗಳೂರು ನಗರ | 1467 | 11 | 0 | 11 | |
| 2 | ಬೆಂಗಳೂರು ಗ್ರಾಮಾಂತರ | 1097 | 156 | 9 | 147 | |
| 3 | ಚಿಕ್ಕಬಳ್ಳಾಪುರ | 1491 | 285 | 85 | 200 | |
| 4 | ಚಿತ್ರದುರ್ಗ | 1734 | 631 | 139 | 492 | |
| 5 | ರಾಮನಗರ | 1242 | 120 | 42 | 78 | |
| 6 | ಕೋಲಾರ | 1879 | 370 | 138 | 232 | |
| 7 | ಶಿವಮೊಗ್ಗ | 1953 | 333 | 121 | 212 | |
| 8 | ದಾವಣಗೆರೆ | 1194 | 245 | 70 | 175 | |
| 9 | ತುಮಕೂರು+ಮಧುಗಿರಿ | 3416 | 708 | 100 | 608 | |
| 10 | ಮೈಸೂರು | 2057 | 443 | 65 | 378 | |
| 11 | ಮಂಡ್ಯ | 1715 | 411 | 16 | 395 | |
| 12 | ಚಾಮರಾಜನಗರ | 805 | 153 | 6 | 147 | |
| 13 | ಚಿಕ್ಕಮಗಳೂರು | 1372 | 297 | 40 | 257 | |
| 14 | ದಕ್ಷಿಣ ಕನ್ನಡ | 1061 | 225 | 12 | 213 | |
| 15 | ಉಡುಪಿ | 666 | 54 | 1 | 53 | |
| 16 | ಹಾಸನ | 2363 | 183 | 25 | 158 | |
| 17 | ಕೊಡಗು | 409 | 30 | 0 | 30 | |
| 18 | ಬೆಳಗಾವಿ + ಚಿಕ್ಕೋಡಿ | 3403 | 798 | 440 | 358 | |
| 19 | ಧಾರವಾಡ | 843 | 186 | 41 | 145 | |
| 20 | ಹಾವೇರಿ | 1283 | 260 | 46 | 214 | |
| 21 | ಗದಗ | 695 | 160 | 24 | 136 | |
| 22 | ಬಾಗಲಕೋಟೆ | 1423 | 250 | 99 | 151 | |
| 23 | ವಿಜಯಪುರ | 1949 | 415 | 65 | 350 | |
| 24 | ಉತ್ತರ ಕನ್ನಡ + ಶಿರಸಿ | 2129 | 339 | 64 | 275 | |
| 25 | ಕಲಬುರಗಿ | 1988 | 338 | 7 | 331 | |
| 26 | ಬಳ್ಳಾರಿ | 717 | 198 | 34 | 164 | |
| 27 | ಬೀದರ್ | 1370 | 359 | 39 | 320 | |
| 28 | ಕೊಪ್ಪಳ | 1076 | 280 | 157 | 123 | |
| 29 | ರಾಯಚೂರು | 1596 | 53 | 95 | -42 | ಹೆಚ್ಚುವರಿ ನಿರ್ಮಾಣ |
| 30 | ವಿಜಯನಗರ | 1046 | 170 | 177 | -7 | ಹೆಚ್ಚುವರಿ ನಿರ್ಮಾಣ |
| 31 | ಯಾದಗಿರಿ | 1030 | 72 | 67 | 5 | |
| | ಒಟ್ಟು | **46469** | **8533** | **2224** | **6358** | |

Scanned with CamScanner